ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ

**Office of the Deputy Commissioner, Chikkaballapur District, Chikkaballapur**

Telephone: 08156-277001 Fax: 08156-277002 e.mail: deo.ckbpur@gmail.com

ಸಂಖ್ಯೆ:ಇಎಸ್‌ಟಿ(2)/ಸಿಆರ್/84/2018-19 ದಿನಾಂಕ: 15/06/2019

**ತಿಳುವಳಿಕೆ ಪತ್ರ**

ವಿಷಯ : ಚಿಕ್ಕಬಳ್ಳಾಪುರ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳ ನೇರ ನೇಮಕಾತಿಯ ಮೂಲ ದಾಖಲೆಗಳನ್ನು ಪರಿಶೀಲನೆಗೆ ಸಲ್ಲಿಸುವ ಬಗ್ಗೆ.

ಉಲ್ಲೇಖ : ಈ ಕಛೇರಿಯ ಸಮಸಂಖ್ಯೆ ಅಧಿಸೂಚನೆ ದಿನಾಂಕ: 06.12.2018.

*****

ಚಿಕ್ಕಬಳ್ಳಾಪುರ ಜಿಲ್ಲಾ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದಗಳನ್ನು ನೇರ ನೇಮಕಾತಿ ಮೂಲಕ ತುಂಬಲು ಆಸಕ್ತ ಹಾಗೂ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿ ನೀವು ಸದರಿ ಹುದ್ದೆಗೆ ನೇಮಕಾತಿ ಕೋರಿ ಅರ್ಜಿ ಸಲ್ಲಿಸಿರುತ್ತೀರಿ. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ನೀವು ಒದಗಿಸಿರುವ ಮಾಹಿತಿ ಆಧರಿಸಿ ಮೂಲ ದಾಖಲೆಗಳನ್ನು ಪರಿಶೀಲಿಸುವ ಸಲುವಾಗಿ ನೀವು ದಿನಾಂಕ: 24/06/2019 ರಂದು ಬೆಳಿಗ್ಗೆ 10.00 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ ಇಲ್ಲಿಗೆ ಖುದ್ದಾಗಿ ಹಾಜರಾಗಲು ಸೂಚಿಸಿದೆ. ಪರಿಶೀಲನೆಗಾಗಿ ಮೂಲ ದಾಖಲೆಗಳನ್ನು ಮಾತ್ರ ಹಾಜರುಪಡಿಸುವುದು ಹಾಗೂ ಅವುಗಳ ನೈಜತೆಗಳನ್ನು ದೃಢಪಡಿಸಿಕೊಳ್ಳುವ ಸಲುವಾಗಿ ನೀವು ಹಾಜರುಪಡಿಸುವ ಎಲ್ಲಾ ದಾಖಲೆಗಳನ್ನು ಈ ಕಛೇರಿಯಲ್ಲೇ ಉಳಿಸಿಕೊಳ್ಳಲಾಗುವುದು. ಒಂದು ವೇಳೆ ನೀವು ನಕಲಿ ದಾಖಲೆಗಳನ್ನು ಹಾಜರುಪಡಿಸಿದ್ದಲ್ಲಿ ನಿಮ್ಮ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ನಿಯಮಾನುಸಾರ ಕ್ರಮ ಜರುಗಿಸಲಾಗುವುದು. ಆದ್ದರಿಂದ ಸರಿಯಾದ ಪೂರ್ಣ ಮೂಲ ದಾಖಲೆಗಳೊಂದಿಗೆ ಮೇಲ್ಕಂಡ ದಿನಾಂಕದಂದು ದಾಖಲೆಗಳ ಪರಿಶೀಲನೆಗೆ ಹಾಜರಾಗಲು ಸೂಚಿಸಿದೆ. ಪರಿಶೀಲನೆಗೆ ನೀವು ಹಾಜರಾಗದಿದ್ದಲ್ಲಿ ಅಥವಾ ಪೂರ್ಣ ಮೂಲ ದಾಖಲೆಗಳನ್ನು ಹಾಜರುಪಡಿಸದಿದ್ದಲ್ಲಿ ಮೇಲ್ಕಂಡ ಹುದ್ದೆಗೆ ನೇಮಕಗೊಳ್ಳಲು ನಿಮಗೆ ಆಸಕ್ತಿಯಿಲ್ಲವೆಂದು ಬಾವಿಸಿ, ನಿಮ್ಮ ನಂತರದ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಕ್ರಮವಹಿಸಲಾಗುವುದು ಹಾಗೂ ನಂತರದ ನಿಮ್ಮ ಯಾವುದೇ ಮನವಿಯನ್ನು ಪುರಸ್ಕರಿಸಲಾಗುವುದಿಲ್ಲ.

ಅಧ್ಯಕ್ಷರು,
**ಗ್ರಾಮಲೆಕ್ಕಿಗರ ನೇಮಕಾತಿ ಮತ್ತು ಆಯ್ಕೆ ಪ್ರಾಧಿಕಾರ**
**ಹಾಗೂ ಜಿಲ್ಲಾಧಿಕಾರಿಗಳು,**
**ಚಿಕ್ಕಬಳ್ಳಾಪುರ ಜಿಲ್ಲೆ.**

**ರವರಿಗೆ :**

-----------------------------

-----------------------------

-----------------------------

-----------------------------

-----------------------------